# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 796 (965) |
| ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 24.07.2024 |
| ಉತ್ತರಿಸುವ ಸಚಿವರು | : | ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬೋಧಕ ವರ್ಗದ ನೇಮಕಾತಿಗೆ ಸಂಬಂಧಿಸಿದಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಇನ್ನಿತರೆ ಇಲಾಖೆಗಳಲ್ಲಿ (ಪ್ರಾಥಮಿಕ, ಪ್ರೌಢ ಶಿಕ್ಷಣ ಪದವಿ ಪೂರ್ವ ಉನ್ನತ ಶಿಕ್ಷಣ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳು ನಿಗದಿಪಡಿಸಿರುವ ವಿವಿಧ ವರ್ಗಗಳ ಅಭ್ಯರ್ಥಿಗಳ ವಯೋಮಿತಿಯಲ್ಲಿ ವ್ಯತ್ಯಾಸ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿನ ಶಾಲೆ/ಕಾಲೇಜುಗಳಲ್ಲಿ ಬೋಧಕ ಹುದ್ದೆಗಳಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಹಾಗೂ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ಮತ್ತು ಸರ್ಕಾರದ ಆದೇಶಗಳಲ್ಲಿ ವಿವಿಧ ವರ್ಗಗಳಿಗೆ ನಿಗಧಿಪಡಿಸಿರುವ ವಯೋಮಿತಿಯಂತೆ ನೇಮಕಾತಿ ಮಾಡಲಾಗುತ್ತಿರುತ್ತದೆ. ಇದಲ್ಲದೆ ಈ ಇಲಾಖೆಯಡಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಬೋಧಕ ಸಿಬ್ಬಂದಿಗಳಿಗೆ ಗರಿಷ್ಟ ವಯೋಮಿತಿಯಲ್ಲಿ ಗರಿಷ್ಟ 5 ವರ್ಷದವರೆಗೆ ನೇಮಕಾತಿಯಲ್ಲಿ ವಯೋಮಿತಿ ಸಡಿಲಿಕೆ ನೀಡಲಾಗಿರುತ್ತದೆ. |
| ಆ) | ಬಂದಿದ್ದಲ್ಲಿ ಇತರೆ ಇಲಾಖೆಗಳಲ್ಲಿ ಬೋಧಕ ವರ್ಗದ ನೇಮಕಾತಿಗೆ ಏಕರೂಪದ ವಯೋಮಿತಿ ನಿರ್ದಿಷ್ಟಪಡಿಸಿರುವಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಪಾಲಿಸದಿರುವುದು ಕಾರಣವೇನು: | |
| ಇ) | ಇದರಿಂದ ಗರಿಷ್ಠ ಸಂಖ್ಯೆಯ ಹಿರಿಯ ಅಭ್ಯರ್ಥಿಗಳಿಗೆ ಅನ್ಯಾಯುವಾಗಲಿದ್ದು ನೇಮಕಾತಿ ಪ್ರಕ್ರಿಯೆಯಿಂದ ವಂಚಿತರಾಗಿದ್ದರಿಂದ ಈ ವ್ಯತ್ಯಾಸ ಸರಿಪಡಿಸಿ ಹಿರಿಯ ಅಭ್ಯರ್ಥಿಗಳಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸರ್ಕಾರ ಕ್ರಮ ವಹಿಸಬಾರದೇಕೆ ಈ ನಿಟ್ಟಿನಲ್ಲಿ ಸರ್ಕಾರದ ನಿಲುವೇನು? | |

**ಸಂಖ್ಯೆ: MWD 156 LMQ 2024**

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು.